# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ, ಬೆಂಗಳೂರು.

### ಮಾರ್ಚ್ ಮಾಹೆಯ 2ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 20-03-2021 ರಂದು ವಾರ್ಡ್ ಸಂಖ್ಯೆ 163, ಕತ್ರಿಗುಪ್ಪೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

*****

ದಿನಾಂಕ: 20-03-2021
ಸ್ಥಳ : ಬಿಬಿಎಂಪಿ ವಿವಿಧೋದ್ದೇಶ ಕಟ್ಟಡ, ಶ್ರೀಕಂಠೇಶ್ವರ ಪಾರ್ಕ್ ಹತ್ತಿರ
ಸಮಯ : ಬೆಳಿಗ್ಗೆ 11.00 ಗಂಟೆಗೆ

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ .

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ದಯಾನಂದ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ಜನಾರ್ಧನ್ .ಪಿ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಿರಿನಗರ ಉಪವಿಭಾಗ |
| 3 | ಶ್ರೀಮತಿ ಶ್ವೇತಾ .ಬಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ 163, ಕತ್ರಿಗುಪ್ಪೆ |
| 4 | ಶ್ರೀ ಗಂಗಾಧರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 163 |
| 5 | ಸುರೇಖ | ವೈದ್ಯಾಧಿಕಾರಿ (ವಿದ್ಯಾಪೀಠ ಆಸ್ಪತ್ರೆ ವಾರ್ಡ್-163 |
| 6 | ಉಮೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-163 |
| 7 | ಸುನಿಲ್ ಆರ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-164 ಘನತ್ಯಾಜ್ಯ ನಿರ್ವಹಣೆ |
| 8 | ಶ್ರೀ ಧವಳೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ದಯಾನಂದ್ ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಉದ್ಯಾನವನಗಳಲ್ಲಿ ಸಾರ್ವಜನಿಕರು ವಾಕಿಂಗ್ ಮಾಡುವ ಸಂದರ್ಭದಲ್ಲಿ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳಲು ಅರಿವು ಮೂಡಿಸಲು ಮಾರ್ಷಲ್‌ಗಳಿಗೆ ತಿಳಿಸಲಾಯಿತು.
2. ವಾರ್ಡ್ ವ್ಯಾಪ್ತಿಯ ಹೋಟೆಲ್ / ರೆಸ್ಟೋರೆಂಟ್‌ಗಳಲ್ಲಿ ಬಳಸಿ ಎಸೆಯುವ ಪ್ಲೇಟ್ ಮತ್ತು ಗ್ಲಾಸ್‌ಗಳನ್ನು ಉಪಯೋಗಿಸಲು ಹಾಗೂ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳಲು ಅರಿವು ಮೂಡಿಸಲು ಮಾರ್ಷಲ್‌ಗಳಿಗೆ ತಿಳಿಸಲಾಯಿತು.
3. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮದುವೆ ಮಂಟಪಗಳಿಗೆ ಬರುವಂತಹ ಜನರ ಬಗ್ಗೆ ಮಾಹಿತಿ ಪಡೆಯುವ ಸಲುವಾಗಿ ರಿಜಿಸ್ಟರ್‌ನ್ನು ನಿರ್ವಹಣೆ ಮಾಡಲು ಹಾಗೂ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳಲು ಅರಿವು ಮೂಡಿಸಲು ಮಾರ್ಷಲ್‌ಗಳಿಗೆ ತಿಳಿಸಲಾಯಿತು.
4. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪಾದಚಾರಿ ಮಾರ್ಗದಲ್ಲಿ ವ್ಯಾಪಾರ ವಹಿವಾಟುಗಳನ್ನು ತೆರವುಗೊಳಿಸಲು ಕ್ರಮವಹಿಸುವಂತೆ ಮಾರ್ಷಲ್‌ಗಳಿಗೆ ತಿಳಿಸಲಾಯಿತು.



Scanned with CamScanner

5. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಜಾಸ್ತಿಯಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ಸಾಮಾಜಿಕ ಅಂತರ ಕಾಪಾಡಿಕೊಳ್ಳಲು, ಸ್ಯಾನಿಟೈಸರ್ ಮೂಲಕ ಕೈಗಳನ್ನು ಸ್ವಚ್ಛಗೊಳಿಸುವುದು ಮತ್ತು ಮಾಸ್ಕ್ ಧರಿಸುವುದರ ಬಗ್ಗೆ ಅರಿವು ಮೂಡಿಸಲು ಹಾಗೂ ಮಾಸ್ಕ್ ಧರಿಸದಿರುವವರಿಗೆ ದಂಡ ವಿಧಿಸಲು ಮಾರ್ಷಲ್‌ಗಳಿಗೆ ತಿಳಿಸಲಾಯಿತು.
6. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಜಾಸ್ತಿಯಾಗುತ್ತಿರುವ ಹಿನ್ನೆಲೆಯಲ್ಲಿ ಸಂಚಾರಿ ಟೆಸ್ಟಿಂಗ್ ಸೆಂಟರ್‌ನ್ನು (ಮೊಬೈಲ್ ಯೂನಿಟ್) ಅಳವಡಿಸಿ ಹೆಚ್ಚು ಸಂಖ್ಯೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸಮರ್ಪಕವಾಗಿ ನಿರ್ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.
7. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಆರೋಗ್ಯ ವೈದ್ಯಾಧಿಕಾರಿಗಳು ಪ್ರತಿ ದಿನ ಸುಮಾರು 125 ಕೋವಿಡ್-19 ಪರೀಕ್ಷೆಗಳನ್ನು ಮಾಡಿರುತ್ತಾರೆ. ಪಾಸಿಟಿವ್ ಪ್ರಕರಣಗಳು ಪತ್ತೆಯಾಗಿದ್ದಲ್ಲಿ ಅವುಗಳಿಗೆ ಟ್ರಾವೆಲ್ ಹಿಸ್ಟರಿ ಇರುತ್ತದೆ ಹಾಗೂ ಕೋವಿಡ್-19 ಲಸಿಕೆ ನೀಡುವ ಕಾರ್ಯಕ್ರಮವು ಸಮರ್ಪಕವಾಗಿ ನಡೆಯುತ್ತಿದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.
8. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆ ಹಾಗೂ ಕಸ ಬೇರ್ಪಡಿಸುವ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಣೆ ಮಾಡುತ್ತಿದ್ದು, ಒಣಕಸ 750 ಕೆ.ಜಿ, ಮಿಶ್ರಕಸ (ಒಣ & ಹಸಿಕಸ) 17 ಟನ್ ಹಾಗೂ ಒಟ್ಟು ತ್ಯಾಜ್ಯ 25 ಟನ್ ಸಂಗ್ರಹಣೆಯಾಗಿರುವುದಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.
9. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ ಸದರಿ ಪ್ರದೇಶದಲ್ಲಿ ಪೈಂಟಿಂಗ್ ಮಾಡಿ ಅಲಂಕೃತಗೊಳಿಸುವ ಮೂಲಕ ಕಸ ಸಂಗ್ರಹಣೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕ್ರಮಕೈಗೊಳ್ಳಲಾಯಿತು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.
10. ಕತ್ರಿಗುಪ್ಪೆ ವಾರ್ಡ್-163ರ ಕಂದಾಯ ಪರಿವೀಕ್ಷಕರು ರೂ: 65.00 ಲಕ್ಷಗಳ ಕಂದಾಯ ಬಾಕಿ ಇರುವುದಾಗಿ ತಿಳಿಸಿರುತ್ತಾರೆ ಆದರಲ್ಲಿ ವಾಣಿಜ್ಯ ಕಟ್ಟಡಗಳ ಕಂದಾಯವು ಹೆಚ್ಚಾಗಿರುತ್ತದೆ. ಸದರಿ ಬಾಕಿಯನ್ನು ವಸೂಲಿ ಮಾಡಲು ವಾರ್ಡ್ ಮಟ್ಟದಲ್ಲಿ ಜಾತಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಕಂದಾಯ ವಸೂಲಾತಿ ಮಾಡಲು ಕ್ರಮವಹಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.
11. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಬೆಸ್ಕಾಂ ರವರು ರಸ್ತೆ ಅಗೆತ ಮಾಡಿ ಕೇಬಲ್ ಅಳವಡಿಸಿದ್ದು, ಸರಿಯಾಗಿ ರಸ್ತೆಗಳನ್ನು ಸರಿಪಡಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ಮತ್ತು ಸಾರ್ವಜನಿಕರು ತಿಳಿಸಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ಸಂಚಾರಿ ವಿಭಾಗ ಪೋಲೀಸ್ ಇನ್ಸ್‌ಪೆಕ್ಟರ್ ರವರು ಸಹ ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸಿ ವಾಹನ ಸಂಚಾರಕ್ಕೆ ಮತ್ತು ಸಾರ್ವಜನಿಕರ ಓಡಾಟಕ್ಕೆ ಅನುಕೂಲ ಮಾಡಿಕೊಡಲು ಸೂಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Swetha R.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃಬೆ.ಮ.ಪಾಲಿಕೆ. ಎಸ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
8. ಕಛೇರಿ ಪ್ರತಿ.

Scanned with CamScanner